# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 953 |
| ಉತ್ತರಿಸಬೇಕಾದ ದಿನಾಂಕ | : | 21.09.2022 |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಪಶುಸಂಗೋಪನೆ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕಲಬುರಗಿ ಹಾಗೂ ಯಾದಗಿರಿ ಜಿಲ್ಲೆಗಳಿಗೆ ಕೇಂದ್ರ ಸರ್ಕಾರದ ಕಿಷನ್ ಸಾಲ ಯೋಜನೆ ಅಡಿಯಲ್ಲಿ ಹೈನುಗಾರಿಕೆಗಾಗಿ ಎಷ್ಟು ಸಾಲ ಮತ್ತು ಸಹಾಯ ಧನ ನೀಡಲಾಗಿದೆ; (ವಿವರ ನೀಡುವುದು) | ಕಲಬುರಗಿ ಜಿಲ್ಲೆಯಲ್ಲಿ 2574 ಫಲಾನುಭವಿಗಳಿಗೆ ಕೇಂದ್ರ ಸರ್ಕಾರದ ಕಿಷನ್ ಸಾಲ ಯೋಜನೆಯಡಿಯಲ್ಲಿ ಹೈನುಗಾರಿಕೆಗಾಗಿ ರೂ.1.16 ಕೋಟಿ ಮೊತ್ತದ ಸಾಲ ಹಾಗೂ ಯಾದಗಿರಿ ಜಿಲ್ಲೆಯಲ್ಲಿ 900 ಫಲಾನುಭವಿಗಳಿಗೆ ರೂ.1.36 ಕೋಟಿ ಮೊತ್ತದ ಸಾಲವನ್ನು ನೀಡಲಾಗಿದೆ. ಈ ಯೋಜನೆಯಡಿಯಲ್ಲಿ ಯಾವುದೇ ಸಹಾಯಧನ ನೀಡಲಾಗುವುದಿಲ್ಲ. |
| ಆ | ಈ ಯೋಜನೆಯಡಿ ಮೇಲ್ಕಂಡ ಜಿಲ್ಲೆಗಳಿಗೆ ಕಳೆದ 2 ವರ್ಷಗಳಲ್ಲಿ ಹೈನುಗಾರರಿಗೆ ಕೇಂದ್ರ ಸರ್ಕಾರದಿಂದ ದೊರೆತಿರುವ ಆರ್ಥಿಕ ನೆರವು ಎಷ್ಟು; (ವಿವರ ನೀಡುವುದು) | ಕಳೆದ 2 ವರ್ಷಗಳಲ್ಲಿ ಕಲಬುರಗಿ ಜಿಲ್ಲೆಗೆ ರೂ.2.13 ಕೋಟಿ ರೂಪಾಯಿಗಳು ಹಾಗೂ ಯಾದಗಿರಿ ಜಿಲ್ಲೆಗೆ ರೂ.1.36 ಕೋಟಿ ರೂಪಾಯಿಗಳ ಆರ್ಥಿಕ ನೆರವು ನೀಡಲಾಗಿದೆ. |
| ಇ | ಕೇಂದ್ರ ಸರ್ಕಾರದ ರಾಷ್ಟ್ರೀಯ ಗೋಕುಲ ಅಭಿಯಾನ ಅಡಿಯಲ್ಲಿ ಜಿಲ್ಲೆಗಳಲ್ಲಿ ವೀರ್ಯ ಕೇಂದ್ರಗಳನ್ನು ಸ್ಥಾಪಿಸಲಾಗಿದೆಯೇ? (ವಿವರ ನೀಡುವುದು) | ಕೇಂದ್ರ ಸರ್ಕಾರದ ರಾಷ್ಟ್ರೀಯ ಗೋಕುಲ ಅಭಿಯಾನ ಅಡಿಯಲ್ಲಿ ಕಲಬುರಗಿ ಹಾಗೂ ಯಾದಗಿರಿ ಜಿಲ್ಲೆಗಳಲ್ಲಿ ಯಾವುದೇ ವೀರ್ಯಸಂಸ್ಕರಣಾ ಕೇಂದ್ರಗಳನ್ನು ಸ್ಥಾಪಿಸಲಾಗಿರುವುದಿಲ್ಲ. |

**ಇ–ಪಸಂಮೀ 219 ಸಲೆವಿ 2022**

(ಪ್ರಭು ಬಿ. ಚವ್ಹಾಣ್)
ಪಶುಸಂಗೋಪನೆ ಸಚಿವರು